ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/90/ಸಿಡಿಸಿ(2)/2021

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:24/09/2021.

-: ಸುತ್ತೋಲೆ :-

ವಿಷಯ:- ಸರ್ಕಾರಿ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಉಪನ್ಯಾಸಕರು/ ಸಹಾಯಕ ಪ್ರಾಧ್ಯಾಪಕರುಗಳ ಉನ್ನತ ವ್ಯಾಸಂಗದ ವಿವರಗಳನ್ನು dtetech ಪೋರ್ಟಲ್ ನಲ್ಲಿ ನಮೂದಿಸುವ ಬಗ್ಗೆ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ವರ್ಗದವರು ಪೂರ್ಣ ಕಾಲಿಕ ನೆಲೆಯಲ್ಲಿ ಉನ್ನತ ವ್ಯಾಸಂಗಕ್ಕೆ ನಿಯೋಜನೆ ಹೊಂದಿದ ನಂತರ, ನಿಯಮಾನುಸಾರ ಪ್ರತಿ 6 ತಿಂಗಳಿಗೊಮ್ಮೆ ಉನ್ನತ ವ್ಯಾಸಂಗದ ಪ್ರಗತಿಯ ವಿವರಗಳನು ಪ್ರಾಂಶುಪಾಲರಿಗೆ ಸಲ್ಲಿಸಬೇಕಾಗಿರುತ್ತದೆ. ಆದರೆ, ಕೆಲವು ಬೋಧಕ ವರ್ಗದವರು ಉನ್ನತ ವ್ಯಾಸಂಗದ ಪ್ರಗತಿಯ ವಿವರಗಳನ್ನು ಸಲ್ಲಿಸದಿರುವುದು ಗಮನಕ್ಕೆ ಬಂದಿರುತ್ತದೆ. ಆದಕಾರಣ, ಈ ಕುರಿತು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ವೆಬ್ ಪೋರ್ಟಲ್ ಅನ್ನು ಪ್ರಾರಂಭಿಸಿದ್ದು, , ಇನ್ನು ಮುಂದೆ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಪ್ರಾಂಶುಪಾಲರು ಈ ಪೋರ್ಟಲ್ ನಲ್ಲಿ ಬೋಧಕ ವರ್ಗದವರ ಉನ್ನತ ವ್ಯಾಸಂಗದ ವಿವರಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

ಸಂಸ್ಥೆಯ ಪ್ರಾಂಶುಪಾಲರು **2017-18 ರಿಂದ** ಪೂರ್ಣಕಾಲಿಕ ನೆಲೆಯಲ್ಲಿ M.Tech / Ph.D ಉನ್ನತ ವ್ಯಾಸಂಗಕ್ಕೆ ನಿಯೋಜನೆಗೊಂಡಿರುವ ಬೋಧಕ ವರ್ಗದವರ ವಿವರಗಳನ್ನು https://dtetech.karnataka.gov.in/dteone/emp/login.aspx ಪೋರ್ಟಲ್ ನಲ್ಲಿ ಸಲ್ಲಿಸಲು ತಿಳಿಸಲಾಗಿದೆ. ಹಾಗೆಯೇ ಸದರಿ ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರು ನಿಯಮಾನುಸಾರ ಉನ್ನತ ವ್ಯಾಸಂಗದಲ್ಲಿ ಸಾಕಷ್ಟು ಪ್ರಗತಿಯನ್ನು ತೋರಿಸಿಲ್ಲ ಅಥವಾ ಸೂಕ್ತ ಕಾಲದೊಳಗೆ ವ್ಯಾಸಂಗವನು ಪೂರ್ಣಗೊಳಿಸದಿದ್ದ ಪಕ್ಷದಲ್ಲಿ ಇಲಾಖೆಯ ಕೇಂದ್ರ ಕಚೇರಿಗೆ ವರದಿ ಮಾಡಲು ಸಹ ಸೂಚಿಸಲಾಗಿದೆ. ಉನ್ನತ ವ್ಯಾಸಂಗಕ್ಕೆ ನಿಯೋಜನೆಗೊಂಡಿರುವ ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರು ನಿಗದಿತ ಅವಧಿಯೊಳಗೆ ಉನ್ನತ ವ್ಯಾಸಂಗ ಪೂರ್ಣಗೊಂಡ ನಂತರ ಕಾಲೇಜು/ವಿಶ್ವವಿದ್ಯಾಲಯದಿಂದ ಬಿಡುಗಡೆ ಹೊಂದಿ, ಮಾತೃ ಸಂಸ್ಥೆಯಲ್ಲಿ ಕಾರ್ಯವರದಿ ಮಾಡಿಕೊಂಡಿರುವ ಬಗ್ಗೆ ಹಾಗೂ ಉನ್ನತ ವ್ಯಾಸಂಗದ ಶೈಕ್ಷಣಿಕ ಪ್ರಗತಿಯ ಬಗ್ಗೆ ವಿವರಗಳನ್ನು ಪೋರ್ಟಲ್ ನಲ್ಲಿ ಭರ್ತಿ ಮಾಡಿ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶಕರು.

ಪ್ರತಿ :

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ /ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗಕ್ಕೆ -ಇಲಾಖಾ ವೆಬ್ ಸೈಟ್ ನಲ್ಲಿ ಪ್ರಚುರ ಪಡಿಸಲು.